ಆ) ಅವುಗಳಿಗಾಗಿ ಸರಾಸರಿ ಪ್ರತಿವರ್ಷ ಆಗುತ್ತಿರುವ ಖರ್ಚು ಎಷ್ಟು?

ಇ) ಕೇಂದ್ರ ಸರ್ಕಾರದಲ್ಲಿ ಕೇವಲ ಮೇಲ್ಪಟ್ಟವರ ಅಧಿಕಾರಿಗಳಿಗೆ ಮಾತ್ರ ದೂರವಾಣಿ ಸೌಕರ್ಯವನ್ನು ಅವರ ನಿವಾಸಗಳಿಗೆ ಒದಗಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಈ) ಈ ಬಗ್ಗೆ ಮರುಪರಿಶೀಲನೆ ಮಾಡಿ ಆ ವೆಚ್ಚವನ್ನು ಕಡಿಮೆ ಮಾಡಲು ಸರ್ಕಾರ ಕ್ರಮ ಕೈಗೊಂಡಿದೆಯೇ?

ಶ್ರೀ ಎಂ. ವೀರಪ್ಪ ಮೊಯಿಲಿ (ಮುಖ್ಯಮಂತ್ರಿಗಳು):

ಅ) ಸರ್ಕಾರದ ಉಪ ಕಾರ್ಯದರ್ಶಿ ಮತ್ತು ಅವರಿಗೂ ಮೇಲ್ಪಟ್ಟ ದರ್ಜೆಯ ಅಧಿಕಾರಿಗಳಿಗೆ ಅವರ ನಿವಾಸದಲ್ಲಿ ದೂರವಾಣಿಗಳನ್ನು ಒದಗಿಸಲಾಗುತ್ತಿದೆ.

ಆ) ಸರ್ಕಾರದ ಉಪ ಕಾರ್ಯದರ್ಶಿ ಹಾಗೂ ಅವರ ಮೇಲ್ಪಟ್ಟ ಅಧಿಕಾರಿಗಳು ಸರ್ಕಾರದ ನಾನಾ ಇಲಾಖೆಗಳಲ್ಲಿ ಹಾಗೂ ರಾಜ್ಯದ ಎಲ್ಲೆಡೆಯಲ್ಲಿ ಕೆಲಸ ಮಾಡುತ್ತಿರುತ್ತಾರೆ. ಆದುದರಿಂದ ವೇಳೆ ಕಡಿಮೆ ಇರುವ ಕಾರಣ ಮಾಹಿತಿ ಒದಗಿಸಲು ಸಾಧ್ಯವಾಗಿರುವುದಿಲ್ಲ.

ಇ) ಇದು ಕೇಂದ್ರ ಸರ್ಕಾರದ ಅಧಿಕಾರಿಗಳಿಗೆ ಸಂಬಂಧಿಸಿದ ಕಾರಣ ಮಾಹಿತಿ ಇರುವುದಿಲ್ಲ.

ಈ) ಹೌದು.

ಕರ್ನಾಟಕ - ಮಹಾರಾಷ್ಟ್ರಗಡಿ ವಿವಾದ

532 - ಶ್ರೀ ಪುಟ್ಟಸ್ವಾಮಿ ಗೌಡ (ಹೊಳಿನರಸೀಪುರ): ಮಾನ್ಯ ಮುಖ್ಯಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಕರ್ನಾಟಕ - ಮಹಾರಾಷ್ಟ್ರ ಗಡಿವಿವಾದವನ್ನು ಬಗೆಹರಿಸಲು ಮಹಾರಾಷ್ಟ್ರ ಮುಖ್ಯಮಂತ್ರಿಯವರು ತಮ್ಮ ರಾಜ್ಯದ ಎಲ್ಲಾ ರಾಜಕೀಯ ಪಕ್ಷಗಳ ನಿಯೋಗವನ್ನು ಪ್ರಧಾನಮಂತ್ರಿಯವರ ಬಳಿಗೆ ಕೊಂಡೊಯ್ಯಲು ನಿರ್ಧರಿಸುವುದು ನಿಜವೇ?

ಆ) ಹಾಗಿದ್ದಲ್ಲಿ, ಕರ್ನಾಟಕ ಸರ್ಕಾರವು ಎಲ್ಲಾ ರಾಜಕೀಯ ಪಕ್ಷಗಳ ನಿಯೋಗವನ್ನು ಕೊಂಡೊಯ್ಯಲು ಕ್ರಮ ಕೈಗೊಳ್ಳುವುದೇ?

ಇ) ಮಹಾಜನ್ ವರದಿಯನ್ನು ಅನುಷ್ಠಾನಗೊಳಿಸಬೇಕೆಂದು ಸರ್ಕಾರ ಮತ್ತೊಮ್ಮೆ ಪ್ರಧಾನ ಮಂತ್ರಿಯವರಿಗೆ ಹಾಗೂ ಕೇಂದ್ರ ಗೃಹ ಸಚಿವರಿಗೆ ಒತ್ತಾಯಿಸುತ್ತದೆಯೇ?

ಶ್ರೀ ಎಂ. ವೀರಪ್ಪ ಮೊಯಿಲಿ (ಮುಖ್ಯಮಂತ್ರಿಗಳು):

ಅ) ಹೌದು.

ಆ) ಇಲ್ಲ.

ಇ) ಹೌದು.

ಬೆಳಗಾಂ ಜಿಲ್ಲೆಯ ಹುದಲಿತಾಲ್ಲೂಕಿನಲ್ಲಿ ಪೋಲೀಸ್ ಠಾಣೆ ನಿರ್ಮಾಣ

583 - ಶ್ರೀ ಕೆ.ಸಿ. ಮೊಡಗೇಕರ್ ದೇಸಾಯಿ (ಬಾಗೇವಾಡಿ): ಮಾನ್ಯ ಮುಖ್ಯಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಬೆಳಗಾಂ ಜಿಲ್ಲೆಯ ಹುದಲಿ ತಾಲ್ಲೂಕಿನಲ್ಲಿ ಪೋಲೀಸ್ ಠಾಣೆಯನ್ನು ನಿರ್ಮಾಣ ಮಾಡುವ ಪ್ರಸ್ತಾವನೆಯನ್ನು ಪ್ರಸಕ್ತ ಆಯವ್ಯಯದಲ್ಲಿ ಸೇರಿಸಲು ಸ್ವೀಕರಿಸಲಾಗಿದೆಯೇ;

ಆ) ಹಾಗಿದ್ದಲ್ಲಿ, ಯಾವಾಗ ನಿರ್ಮಾಣ ಕಾರ್ಯವನ್ನು ಕೈಗೆತ್ತಿಕೊಳ್ಳಲಾಗುವುದು?

ಶ್ರೀ ಎಂ. ವೀರಪ್ಪ ಮೊಯಿಲಿ (ಮುಖ್ಯಮಂತ್ರಿಗಳು):